## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕ ಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 138 ಚಲವಾದಿ ಪಾಳ್ಯ ಬೆಂಗಳೂರು


******************************************************************************

ಸಂಖ್ಯೆ: w-138/Committee/Proceding -20/2021-22 dt. 20-09-2021

### ಸಭೆಯ ನಡವಳಿಗಳು

ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಮಾನ್ಯ ನೋಡಲ್ ಆಧಿಕಾರಿಗಳ ಅನುಪಸ್ಥಿತಿಯಲ್ಲಿ ಉಪಸ್ಥಿತಗೊಂಡಿರುವ ಉನ್ನತ ಸಭೆಗೆ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ಹಾಗೂ ಸಭೆಯನ್ನು ಮುನ್ನಡೆಸಲಾಯಿತು

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಹಾಯಕ ಕಾರ್ಯನಿರ್ವಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭಾ ಸದಸ್ಯರು ವಾರ್ಡ್ ವ್ಯಾಪ್ತಿಯ ಪ್ರದೇಶಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಸ್ತೆ ಗುಂಡಿಗಳಿದ್ದು ತಾವು ಹಿಂದಿನ ಸಭೆಯಲ್ಲಿ ನಿರ್ಣಯಿಸಿದಂತೆ ರಸ್ತೆ ಗುಂಡಿಗಳನ್ನು ಮುಚ್ಚದಿರುವ ಬಗ್ಗೆ ಸಭೆಯುಲ್ಲಿ ಪ್ರಸ್ತಾಪಿಸಿದರು.

ಈ ಬಗ್ಗೆ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಮಳೆಗಾಲವಿರುವುದರಿಂದ ತುರ್ತಾಗಿ ರಸ್ತೆ ಗುಂಡಿಗಳನ್ನು ಮುಚ್ಚುವುದು ಸಾಧ್ಯವಿಲ್ಲವಿರುವುದಿಲ್ಲ, ಮುಂದಿನ ದಿನಗಳಲ್ಲಿ ಮಳೆ ಕಡಿಮೇಯಾದ ಮೇಲೆ ರಸ್ತೆ ಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲೂಎಸ್ಎಸ್ಬಿ ಕಛೇರಿಗೆ ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲೂಎಸ್ಎಸ್ಬಿ ಅಧಿಕಾರಿಗಳು ವಾರ್ಡ್ 138 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

.. ಕಿರಿಯ ಆರೋಗ್ಯ ಪರಿವೀಕ್ಷರು ವಾರ್ಡ್ -138ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಹಲವು ಹಬ್ಬ ಹರಿದಿನಗಳು ಹೆಚ್ಚಿಗಿರುವುದರಿಂದ ಕಸ ವಿಲೇವಾರಿ ಘಟಕಗಳಲ್ಲಿ ಮಿಶ್ರಕಸ ವಿಲೇವಾರಿಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ವಾರ್ಡ್ ವಿಂಗಡನೆಯ ಬಗ್ಗೆ ವಿವರವನ್ನು ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಸಭೆಯಲ್ಲಿ ವಾರ್ಡ್ ವಿಂಗಡನೆ ಬಗ್ಗೆ ಅಂತಿಮ ನಿರ್ದಾರವಾದ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 ಇತ್ತಿಚೆಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

-3

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 3ನೇ ಅಲೆಯಿಂದ ಕೋವಿಡ್-19 ಟೆಸ್ಟ್‌ಗಳನ್ನು ಹೆಚ್ಚಿಸಿದ್ದು ಹಾಗೂ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿ ಹಾಗೂ ವಾರ್ಡ್‌ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ಅಭಿಯಾನವನ್ನು ಕೈಗೊಂಡು ಅಧಿಕ ಜನರಿಗೆ ಮನವೊಲಿಸಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್-138ರ ವ್ಯಾಪ್ತಿಯಲ್ಲಿ ಹಲವು ರೀತಿಯಲ್ಲಿ ಬೆಸ್ಕಾಂಗೆ ಸಂಬಂಧಿಸಿದ ದೂರುಗಳು ಬಂದಿದ್ದು ರಾತ್ರಿಯ ಸಮಯದಲ್ಲಿ ಸ್ವಿಚ್‌ಗಳು ಹಾಗೂ ಲೈಟ್‌ಗಳು ಹಾಳಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸಹಾಯಕ ಕಾರ್ಯ ಪಾಲಕ ಅಭಿಯಂತರರು(ಬೆಸ್ಕಾಂ) ರವರ ಪ್ರತಿನಿದಿಯು ಸದರಿ ವಿಷಯದ ಬಗ್ಗೆ ತುರ್ತು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಸದಸ್ಯರು ವಾರ್ಡ್ ವ್ಯಾಪ್ತಿಯಲ್ಲಿ ಗಣೇಶ ಪ್ರತಿಸ್ಥಾಪನೆಯ ಬಗ್ಗೆ ಸಭೆಯಲ್ಲಿ ವಿವರವನ್ನು ಕೋರಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಗಣೇಶ ಪ್ರತಿಸ್ಥಾಪನೆಯ ವಿಚಾರವಾಗಿ ಸಮಿತಿಯ ಸದಸ್ಯರಿಗೆ ಮುಖ್ಯ ಆಯುಕ್ತರ ಸುತ್ತೋಲೆಯನ್ನು ಸಭೆಯಲ್ಲಿ ಮಂಡಿಸಿ, ಒಂದು ವಾರ್ಡ್‌ಗೆ ಒಂದು ಗಣೇಶವನ್ನು ಸ್ಥಾಪನೆ ಮತ್ತು 5 ದಿನಗಳ ಮಾತ್ರ ಅನುಮತಿ ಇರುವ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | --- | ------- | ------- |
| 2 | ಶ್ರೀ ಗಿರಿಧರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 138, ಬಿ.ಬಿ.ಎಂ.ಪಿ. ಮೊ. 9618436036 | ಸದಸ್ಯ ಕಾರ್ಯದರ್ಶಿ | (signature) |

---4

| | | | |
|---|---|---|---|
| 3 | ಗೀತಾ ಹೆಚ್, ದೂ. 9986537126<br>ಕಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ -138 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ದೂ. 9342582372 ಶ್ರೀ ಬಾಬು (ಕೆಲಸ ಪರಿವೀಕ್ಷಕರು) | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ ದೂ. 9845563157 | ಸದಸ್ಯರು | |
| 6 | ಶ್ರೀ ಮೊಹಮದ್ ಸಾಧೀಕ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ನಂ. 9945373444 | ಸದಸ್ಯರು | |
| 7 | ಶ್ರೀ ಮುಸ್ತಕ್ ಶರೀಫ್ ದೂ. 9880960040<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ | ಸದಸ್ಯರು | |
| 8 | ಶ್ರೀ ಶಿವಯ್ಯ (ಆರ್.ಐ) 9480685303<br>ಕಂದಾಯ ಪರಿವೀಕ್ಷಕರು | ಸದಸ್ಯರು | For |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ ಗೀತಾ ಹೆಚ್, ದೂ. 9986537126 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು .<br>(ಬೇಸ್ಕಂ)ರವರ ಪ್ರತಿನಿಧಿ | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 138
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 138

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ